ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

22

ಇಲಾಖೆ / ವಿಷಯ : DEPARTMENT / SUBJECT: ವಿಧಾನಸಭೆ ಕಲಾಪಗಳು - [illegible]

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ

ದಿನಾಂಕ : DATE : 2/3/21

# ಶರತ್ ಪರ ಕಾಂಗ್ರೆಸ್-ದಳ ಬ್ಯಾಟಿಂಗ್

ವಿಧಾನಸಭೆ: ಹೊಸಕೋಟೆ ಕ್ಷೇತ್ರದಲ್ಲಿ ಕಾರ್ಯಕ್ರಮವೊಂದಕ್ಕೆ ಸ್ಥಳೀಯ ಶಾಸಕರಾದ ಶರತ್ ಬಚ್ಚೇಗೌಡರಿಗೆ ಆಹ್ವಾನ ನೀಡದೆ ಶಿಷ್ಟಾಚಾರ ಉಲ್ಲಂಘಿಸಿರುವ ಸಂಬಂಧ ಮಾತನಾಡಲು ಅವಕಾಶ ಕೊಡಬೇಕು ಎಂದು ಕಾಂಗ್ರೆಸ್ ಹಾಗೂ ಜೆಡಿಎಸ್ ಸದಸ್ಯರು ಒತ್ತಾಯಿಸಿ ಸದನದ ಬಾವಿಗೆ ಇಳಿದ ಪ್ರಸಂಗ ಸೋಮವಾರ ನಡೆಯಿತು.

ಪ್ರಶ್ನೋತ್ತರ ಕಲಾಪ ಮುಗಿಯುತ್ತಿದ್ದಂತೆ ಪಕ್ಷೇತರ ಶಾಸಕ ಶರತ್ ಬಚ್ಚೇಗೌಡ, ಹಕ್ಕುಚ್ಯುತಿ ಕುರಿತು ಪ್ರಸ್ತಾಪಕ್ಕೆ ಅವಕಾಶ ಕೋರಿದರು. ಇದಕ್ಕೆ ಸ್ಪೀಕರ್ ಆಕ್ಷೇಪ ವ್ಯಕ್ತಪಡಿಸಿ, ನಾನಿನ್ನೂ ನೀವು ಕೊಟ್ಟಿರುವ ಪ್ರಸ್ತಾವನೆ ನೋಡಿಲ್ಲ, ಅದನ್ನು ಪರಿಶೀಲಿಸಿ ನಂತರ ಅವಕಾಶ ಕೊಡುತ್ತೇನೆ ಎಂದು ಹೇಳಿದರು.

ಪ್ರತಿಪಕ್ಷನಾಯಕ ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್, ಕೃಷ್ಣಬೈರೇಗೌಡ ಅವರು ಶರತ್ ಬೆಂಬಲಕ್ಕೆ ನಿಂತು, ಮೊದಲಿಗೆ ವಿಷಯ ಪ್ರಸ್ತಾಪಿಸಲು ಅವಕಾಶ ಕೊಡಿ ಎಂದು ಸ್ಪೀಕರ್‌ಗೆ ಮನವಿ ಮಾಡಿದರು. ಜೆಡಿಎಸ್‌ನ ಸದಸ್ಯರು ಧ್ವನಿಗೂಡಿಸಿದರು.

ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಬಸವರಾಜ ಬೊಮ್ಮಾಯಿ ಅವರು, ಅವರ ಪ್ರಸ್ತಾಪ ಏನು ಎಂಬುದೇ ಗೊತ್ತಿಲ್ಲ. ಮೊದಲು ನೀವು ಪರಿಶೀಲಿಸಿ ನಂತರ ತೀರ್ಪು ಕೊಡಿ ಎಂದು ಸ್ಪೀಕರ್ ಅವರಿಗೆ ಹೇಳಿದರು.

ಸದನದ ಸದಸ್ಯರ ಹಕ್ಕು ರಕ್ಷಣೆ ಸ್ಪೀಕರ್ ಅವರದ್ದು, ನೀವೇ ನನಗೆ ರಕ್ಷಣೆ ಕೊಡದಿದ್ದರೆ ಹೇಗೆ? ಮಾತನಾಡಲು ಅವಕಾಶ ಕೊಡಿ ಎಂದು ಶರತ್ ಬಚ್ಚೇಗೌಡ ಒತ್ತಾಯಿಸಿದರು. ಸ್ಪೀಕರ್ ಅವರು ಅವಕಾಶ ಕೊಡದ ಕಾರಣ ಕಾಂಗ್ರೆಸ್ ಮತ್ತು ಜೆಡಿಎಸ್ ಸದಸ್ಯರು ಸದನದ ಬಾವಿಗೆ ಇಳಿದು ಪ್ರತಿಭಟನೆ ಘೋಷಣೆ ಕೂಗಿದರು. ಇದರಿಂದ ಬೇಸರಗೊಂಡ ಸ್ಪೀಕರ್, ಕಲಾಪ ಸಲಹಾ ಸಮಿತಿ ಸಭೆಗೆ ಮುನ್ನ ಶರತ್ ಬಚ್ಚೇಗೌಡರು ಪತ್ರ ಕೊಟ್ಟಿದ್ದಾರೆ. ನಾನಿನ್ನೂ ಪರಿಶೀಲಿಸಿಲ್ಲ. ಇಂದೇ ಮಧ್ಯಾಹ್ನದ ನಂತರ ಚರ್ಚೆಗೆ ಅವಕಾಶ ಕೊಡುತ್ತೇನೆ ಎಂದು ಹೇಳಿದರು. ನಂತರ ಸಿದ್ದರಾಮಯ್ಯ ಧರಣಿ ವಾಪಸ್ ಪಡೆದರು.

## ಹಕ್ಕುಚ್ಯುತಿ ಪ್ರಕರಣ: ಜಿಲ್ಲಾಧಿಕಾರಿಯಿಂದ ವರದಿ

ಬೆಂಗಳೂರು: ಹೊಸಕೋಟೆ ವಿಧಾನಸಭಾ ಕ್ಷೇತ್ರದಲ್ಲಿ ಶಾಸಕ ಶರತ್ ಬಚ್ಚೇಗೌಡಗೆ ಹಕ್ಕುಚ್ಯುತಿ ಪ್ರಕರಣದ ಕುರಿತು ಜಿಲ್ಲಾಧಿಕಾರಿಯಿಂದ ವರದಿ ಪಡೆದು ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ತಮ್ಮ ಕ್ಷೇತ್ರದಲ್ಲಿ ಸರ್ಕಾರಿ ಕಾರ್ಯಕ್ರಮದಲ್ಲಿ ಅಧಿಕೃತವಾಗಿ ತಮ್ಮ ಹೆಸರು ಪ್ರಕಟಿಸದೇ, ತರಾತುರಿಯಲ್ಲಿ ಅಧಿಕಾರಿಗಳು ರಾಜಕೀಯ ಒತ್ತಡಕ್ಕೆ ಮಣಿದು ಕಾರ್ಯಕ್ರಮ ನಡೆಸಿದ್ದಾರೆ. ಇದರಿಂದ ತಮ್ಮ ಹಕ್ಕು ಚ್ಯುತಿಯಾಗಿದ್ದು ಸಂಬಂಧ ಪಟ್ಟ ಅಧಿಕಾರಿಯನ್ನು ಅಮಾನತು ಮಾಡಬೇಕೆಂದು ಆಗ್ರಹಿಸಿದರು.

ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಅವರಿಗೆ ಬೆಂಬಲಿಸಿ, ಸರ್ಕಾರ ಮೊದಲು ಶಾಸಕರ ಹಕ್ಕುಚ್ಯುತಿಯಾಗದಂತೆ ನೋಡಿಕೊಳ್ಳಬೇಕು. ಅಧಿಕಾರಿಗಳು ಈ ರೀತಿ ಬೇಜವಾಬ್ದಾರಿತನದಿಂದ ನಡೆದುಕೊಂಡರೆ ಶಾಸಕರಿಗೆ ಅವಮಾನ ಮಾಡಿದಂತಾಗುತ್ತದೆ. ಈ ಪ್ರಕರಣವನ್ನು ಹಕ್ಕುಬಾಧ್ಯತಾ ಸಮಿತಿಗೆ ಒಪ್ಪಿಸಬೇಕೆಂದು ಆಗ್ರಹಿಸಿದರು.